## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 508 |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ನೇಮಕವಾದವರು) |
| ಉತ್ತರಿಸಬೇಕಾದ ದಿನಾಂಕ | 19.02.2024 |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಕಿಮ್ಸ್)ನಲ್ಲಿ ಬಿ.ಎಸ್ಸಿ ನರ್ಸಿಂಗ್ ಕಾಲೇಜು ಪ್ರಾರಂಭಿಸಲು ಅನುಮತಿ ನೀಡಲಾಗಿದೆಯೇ: ಹಾಗಿದ್ದಲ್ಲಿ. ಸದರಿ ನರ್ಸಿಂಗ್ ಕಾಲೇಜಿನಲ್ಲಿ ಮಂಜೂರಾಗಿರುವ ಹುದ್ದೆಗಳ ವಿವರ ನೀಡುವುದು: | ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 31 ಕೆಯುಎಂ 2021, ದಿನಾಂಕ:15.02.2021ರಲ್ಲಿ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಅಧೀನದಲ್ಲಿ ಬಿ.ಎಸ್ಸಿ ನರ್ಸಿಂಗ್ ಕಾಲೇಜನ್ನು ಪ್ರಾರಂಭಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆ ನೀಡಿ ಆದೇಶಿಸಿದೆ.<br>"ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೊಳಪಟ್ಟಿರುತ್ತದೆ".<br>ಬಿ.ಎಸ್ಸಿ ನರ್ಸಿಂಗ್ ಕಾಲೇಜು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವುದರಿಂದ 371ಜೆ ಅನ್ವಯ ಹುದ್ದೆಗಳ ವರ್ಗೀಕರಣದ ಪ್ರಶ್ನೆ ಉದ್ಭವಿಸುವುದಿಲ್ಲ. |
| ಆ) | ಸದರಿ ಹುದ್ದೆಗಳನ್ನು 371 ಜೆ ಅನ್ವಯ ವರ್ಗೀಕರಿಸಿದಲ್ಲಿ ವಿವರ ಒದಗಿಸುವುದು: ಹಾಗಿದ್ದಲ್ಲಿ. 371ಜೆ ಅನ್ವಯ ವರ್ಗೀಕರಿಸದಿರಲು ಕಾರಣವೇನು: | |
| ಇ) | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಕಿಮ್ಸ್) ಯ ಬಿ.ಎಸ್ಸಿ. ನರ್ಸಿಂಗ್ ಕಾಲೇಜಿನಲ್ಲಿ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ಯಾವ ರೀತಿ ನಿರ್ವಹಿಸಲಾಗುತ್ತಿದೆ: ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಕಿಮ್ಸ್) ಯಿಂದ ಬಿ.ಎಸ್ಸಿ. ನರ್ಸಿಂಗ್ ಕಾಲೇಜಿಗೆ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆಯೇ: ಹಾಗಿದ್ದಲ್ಲಿ, ಸಿಬ್ಬಂದಿಗಳನ್ನು ವಿದ್ಯಾರ್ಹತೆ, ಭೋದಕ ಅನುಭವವನ್ನು ನರ್ಸಿಂಗ್ ಕೌನ್ಸಿಲ್‌ನ ನಿಯಮದಂತೆ ನಿಯೋಜನೆಗೊಳಿಸಲಾಗಿದೆಯೇ ಇಲ್ಲದಿದ್ದಲ್ಲಿ ಯಾವ ಆಧಾರದಲ್ಲಿ ನಿಯೋಜನೆ ಮಾಡಲಾಗಿದೆ: ನರ್ಸಿಂಗ್ ಕೌನ್ಸಿಲ್‌ನ ನಿಯಮದಂತೆ ನಿಯೋಜನೆಗೊಳಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು? (ವಿವರ ನೀಡುವುದು) | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಪೈಕಿ ಭಾರತೀಯ ಶುಶ್ರೂಷಕ ಮಂಡಳಿಯ ನಿಯಮಗಳಂತೆ ಸ್ನಾತಕೋತ್ತರ ನರ್ಸಿಂಗ್ ವಿದ್ಯಾರ್ಹತೆ ಹಾಗೂ ಬೋಧಕ ಅನುಭವವುಳ್ಳವರನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ಸದರಿ ಬಿ.ಎಸ್ಸಿ ನರ್ಸಿಂಗ್ ಕಾಲೇಜಿಗೆ ನಿಯೋಜನೆಗೊಳಿಸಿ ನಿರ್ವಹಿಸಲಾಗುತ್ತಿದೆ. |

ಸಂಖ್ಯೆ: ಎಂಇಡಿ 83 ಎಂಪಿಎಸ್ 2024

(ಡಾ|| ಶರಣಪ್ರಕಾಶ ಆರ್. ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.